Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

04.07.2025 18.40 hrs

<><*<><>*><>

ಮುಖ್ಯಾಂಶಗಳು

- ದೇವನಹಳ್ಳಿ ತಾಲೂಕು ಚೆನ್ನರಾಯಪಟ್ಟಣದಲ್ಲಿ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಇದೇ ೧೫ ರೊಳಗೆ ಸೂಕ್ತ ತೀರ್ಮಾನ - ಮುಖ್ಯಮಂತ್ರಿ
- ರಾಣೆಬೆನ್ನೂರಿನ ಬೆಟ್ಟದ ಮಲ್ಲೇಶ್ವರ ಗುಡ್ಡ ಪ್ರವಾಸಿ ತಾಣವಾಗಿ ಅಭಿವೃದ್ಧಿ
- ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ೨೫ನೇ ಘಟಿಕೋತ್ಸವಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಚಾಲನೆ
- ಬಿಬಿಎಂಪಿ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರಿಗೆ ನಿಯಮಿತ ಆರೋಗ್ಯ ತಪಾಸಣೆ

<><*<><>*><>

ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣದಲ್ಲಿ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಈಗಾಗಲೇ ಅಂತಿಮ ಅಧಿಸೂಚನೆಯಾಗಿದ್ದು, ಈ ಬಗ್ಗೆ ಇರುವ ಕಾನೂನು ತೊಡಕುಗಳನ್ನು ನಿವಾರಿಸಿ ರೈತರ ಸಭೆ ಕರೆಯಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣದ ರೈತ ಹೋರಾಟಗಾರರು, ಸ್ಥಳೀಯ ಮುಖಂಡರು ಹಾಗೂ ಹೋರಾಟ ಒಕ್ಕೂಟದ ಮುಖಂಡರೊಂದಿಗೆ ಸಭೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ಸಂಬಂಧ ಕಾನೂನು ಸಮಸ್ಯೆ ನಿವಾರಿಸಲು ಸರ್ಕಾರಕ್ಕೆ ಹತ್ತು ದಿನಗಳ ಕಾಲಾವಾಕಾಶ ಬೇಕಿದ್ದು, ಈ ಬಗ್ಗೆ ಸೂಕ್ತ ತೀರ್ಮಾನ ಕೈಗೊಂಡು ಇದೇ ೧೫ ರಂದು ರೈತ ಹೋರಾಟಗಾರರೊಂದಿಗೆ ಸಭೆ ನಡೆಸಲು ತೀರ್ಮಾನಿಸಲಾಗಿದೆ ಎಂದರು. ಇನ್ನೊಂದೆಡೆ, ವಿಧಾನಪರಿಷತ್ ಸದಸ್ಯ ರವಿಕುಮಾರ್, ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಬಗ್ಗೆ ಹೇಳಿಕೆ ನೀಡಿದ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರವಿಕುಮಾರ್ ಅವರ ವಿರುದ್ಧ ಪ್ರಕರಣ ದಾಖಲಾಗಿದ್ದು, ಸೂಕ್ತ ಪೊಲೀಸ್ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

<><*<><>*><>

ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲೂಕು ಬೆಟ್ಟದ ಮಲ್ಲೇಶ್ವರ ಗುಡ್ಡವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುತ್ತದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ರಾಣೆಬೆನ್ನೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಟ್ಟದ ಮಲ್ಲೇಶ್ವರ ಗುಡ್ಡಕ್ಕೆ ಪ್ರವಾಸಿಗರನ್ನು ಆಕರ್ಷಿಸಲು ಅಗತ್ಯ ಕ್ರಮ ವಹಿಸಲಾಗುತ್ತದೆ. ಅಗತ್ಯವಿರುವ ಮೂಲ ಸೌಕರ್ಯಗಳ ಅಭಿವೃದ್ಧಿಗೆ ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಜೊತೆಗೆ ಗುಡ್ಡಕ್ಕೆ ಪ್ರವಾಸಿಗರು ತೆರಳಲು ಅನುಕೂಲ ಕಲ್ಪಿಸಲು ಐದು ಜೀಪ್ ವ್ಯವಸ್ಥೆ ಮಾಡಲಾಗಿದ್ದು, ಆಗಸ್ಟ್ ೧೫ ರಂದು ಚಾಲನೆ ನೀಡಲಾಗುವುದು ಎಂದು ಮಾಹಿತಿ ನೀಡಿದರು.

<><*<><>*><>

ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ೨೫ನೇ ಘಟಿಕೋತ್ಸವಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಚಾಲನೆ ನೀಡಿದರು. ಇದೇ ವೇಳೆ ಸ್ನಾತಕ ಹಾಗೂ ಸ್ನಾತಕೋತ್ತರ ವಿವಿಧ ತಾಂತ್ರಿಕ ಪದವಿಗಳಲ್ಲಿ ರ್‍ಯಾಂಕ್ ವಿಜೇತರಿಗೆ ಚಿನ್ನದ ಪದಕಗಳನ್ನು ಹಾಗೂ ಪಿಎಚ್.ಡಿ ಪದವಿ ಪ್ರದಾನ ಮಾಡಿದರು.  ಅಲ್ಲದೇ, ಇಸ್ರೋ ಅಧ್ಯಕ್ಷ ಡಾ. ವಿ.ನಾರಾಯಣನ್, ಎಕ್ಸೆಲ್ ಇಂಡಿಯಾ ಸಂಸ್ಥಾಪಕ ಪ್ರಶಾಂತ ಪ್ರಕಾಶ್, ಏಟ್ರಿಯಾ ವಿಶ್ವವಿದ್ಯಾಲಯ ಕುಲಾಧಿಪತಿ ಸಿ.ಎಸ್.ಸುಂದರ್ ರಾಜು ಅವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು.  ಬಳಿಕ ಮಾತನಾಡಿದ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಪದವಿ ಪಡೆದ ವಿದ್ಯಾರ್ಥಿಗಳು ಸೂಕ್ತ ಉದ್ಯೋಗವಕಾಶ ಪಡೆಯುವುದರ ಜೊತೆಗೆ, ಸಮಾಜ ಹಾಗೂ ರಾಷ್ಟ್ರದ ಶ್ರೇಯೋಭಿವೃದ್ಧಿಗೆ ಶ್ರಮಿಸುವುದು ಆದ್ಯ ಕರ್ತವ್ಯವಾಗಿದೆ. ವಿಜ್ಞಾನ, ತಂತ್ರಜ್ಞಾನಗಳ ನೂತನ ಆವಿಷ್ಕಾರಗಳಿಂದ ಕೂಡಿದ ಆಧುನಿಕ ಜಗತ್ತು ಔದ್ಯೋಗಿಕ ಕ್ರಾಂತಿಯನ್ನು ಸಾಧಿಸಿದೆ. ವೈಯಕ್ತಿಕ ಕಾರ್ಯಕ್ಷೇಮತೆಯೊಂದಿಗೆ ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನದ ಮೂಲಕ ಭಾರತವನ್ನು ಪ್ರಗತಿಯತ್ತ ಕೊಂಡೊಯ್ಯಬೇಕು ಎಂದು ಸಲಹೆ ನೀಡಿದರು.

ಧ್ವನಿ : ರಾಜ್ಯಪಾಲ  ಥಾವರ್ ಚಂದ್ ಗೆಹ್ಲೋಟ್

**<><*<><>*><>**

ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಇಲಾಖೆಯಿಂದ ಜಿಲ್ಲೆಯ ಶ್ರೀರಂಗಪಟ್ಟಣದ ಪ್ರವಾಸಿ ತಾಣಗಳನ್ನು ಸಮಗ್ರವಾಗಿ ಅಭಿವೃದ್ಧಿ ಮಾಡಲು ಸಿದ್ಧತೆ ನಡೆಸಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.  ಮಂಡ್ಯ ನಗರದ ಜಿಲ್ಲಾ ಪಂಚಾಯಿತಿಯ ಕಾವೇರಿ ಸಭಾಂಗಣದಲ್ಲಿಂದು ನಡೆದ ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶ್ರೀರಂಗಪಟ್ಟಣದಲ್ಲಿ ಹಲವಾರು ಪ್ರವಾಸಿ ತಾಣಗಳಿದ್ದು, ಈ ಎಲ್ಲ ತಾಣಗಳ ಅಭಿವೃದ್ಧಿಪಡಿಸಿ, ಪ್ರವಾಸಿಗರ ಆಕರ್ಷಿಸಲು ಮತ್ತು ಯುವಕರಿಗೆ ಉದ್ಯೋಗ ಸೃಷ್ಟಿಸುವ ನಿಟ್ಟಿನಲ್ಲಿ ಚಿಂತನೆ ನಡೆಸಲಾಗಿದೆ ಎಂದು ಹೇಳಿದರು. ಪ್ರವಾಸಿ ತಾಣಗಳ ಅಭಿವೃದ್ಧಿ ದೃಷ್ಟಿಯಿಂದ ಈಗಾಗಲೇ ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಶೇಖಾವತ್ ಅವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಿದ್ದು, ಶೀಘ್ರದಲ್ಲಿಯೇ ಹಣ ಬಿಡುಗಡೆ ಮಾಡಿಸಿ, ಪ್ರವಾಸಿ ತಾಣಗಳ ಅಭಿವೃದ್ಧಿ ಕಾಮಗಾರಿ ಆರಂಭಿಸಲಾಗುವುದು ಎಂದು ವಿವರಿಸಿದರು.

ಈ ಬಾರಿ ಮುಂಗಾರು ಮಳೆ ಉತ್ತಮವಾಗಿದ್ದು, ಕೆಆರ್‌ಎಸ್ ಜಲಾಶಯ ಭರ್ತಿಯಾಗಿದೆ. ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ಕೆರೆಕಟ್ಟೆಗಳನ್ನು ಭರ್ತಿ ಮಾಡಬೇಕು ಎಂದು ಅಧಿಕಾರಿಗಳಿಗೆ ಸಚಿವ ಎಚ್.ಡಿ.ಕುಮಾರಸ್ವಾಮಿ ಸೂಚಿಸಿದರು.

**<><*<><>*><>**

ಬಿಬಿಎಂಪಿ ವ್ಯಾಪ್ತಿಯಲ್ಲಿ ಎಲ್ಲಾ ಪೌರ ಕಾರ್ಮಿಕರಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ ಶಿಬಿರಗಳನ್ನು ನಡೆಸಲು ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ನಿಯಮಿತ ಕಚೇರಿಯಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಘನತ್ಯಾಜ್ಯ ವಿಭಾಗದಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಆರೋಗ್ಯ ತಪಾಸಣಾ ಶಿಬಿರಗಳನ್ನು ನಡೆಸುವ ಮೂಲಕ, ಆರೋಗ್ಯ ಸಮಸ್ಯೆಗಳನ್ನು ಪತ್ತೆಹಚ್ಚಿ, ತುರ್ತು ವೈದ್ಯಕೀಯ ಸಹಾಯ ಮಾಡುವಂತೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ರಾಜ್ಯದಲ್ಲಿರುವ ವಿವಿಧ ೯೧ ವರ್ಗಗಳ ೩೫ ಲಕ್ಷ ಕಾರ್ಮಿಕರನ್ನು ಗುರುತಿಸಿ, ಉಚಿತವಾಗಿ ನೋಂದಾಯಿಸಿ, ವಿವಿಧ ಸೌಲಭ್ಯಗಳನ್ನೊಳಗೊಂಡ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಸಹಯೋಗದಲ್ಲಿ ವಿಜಯನಗರ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

<><*<><>*><>

ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ಶಾಸಕ ಕೆ.ಹೆಚ್.ಪುಟ್ಟಸ್ವಾಮಿಗೌಡ ಇಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಬೆಂಗಳೂರಿನಲ್ಲಿ ಭೇಟಿಯಾಗಿ, ಗೌರಿಬಿದನೂರು ರೈಲ್ವೆ ನಿಲ್ದಾಣದ ಸಮಸ್ಯೆಗಳನ್ನು ಬಗೆಹರಿಸುವಂತೆ ಮನವಿ ಮಾಡಿದರು. ಈ ಕುರಿತು ಮಾಹಿತಿ ನೀಡಿದ ಶಾಸಕ ಪುಟ್ಟಸ್ವಾಮಿಗೌಡ, ಹಿಂದೂಪುರ-ಬೆಂಗಳೂರು ಪ್ಯಾಸೆಂಜರ್ ರೈಲಿಗೆ ಹೆಚ್ಚುವರಿ ಬೋಗಿಗಳನ್ನು ಒದಗಿಸಲು ಹಾಗೂ ರೈಲ್ವೆ ಪೊಲೀಸ್ ಹೊರಠಾಣೆ ತೆರೆಯಲು ಮತ್ತು ಚಿಕ್ಕ ಕುರಗೋಡು ಬಳಿ ಮೇಲ್ಸೇತುವೆ ಕಾಮಗಾರಿಗಳನ್ನು ಶೀಘ್ರವಾಗಿ ಅನುಷ್ಠಾನಗೊಳಿಸಲು ಮನವಿ ಮಾಡಲಾಯಿತು ಎಂದು ತಿಳಿಸಿದರು.

<><*<><>*><>

ಹಾವೇರಿ ಜಿಲ್ಲೆಯಲ್ಲಿ ಸುರಿಯುತ್ತಿರುವ ನಿರಂತರ ಮಳೆಯಿಂದಾಗಿ ಜಮೀನುಗಳಲ್ಲಿ ಮುಳ್ಳು ಸಜ್ಜೆ ಕಳೆ ಬೆಳೆದು ನಿಂತಿದ್ದು, ರೈತರಿಗೆ ಸಮಸ್ಯೆಯನ್ನುಂಟು ಮಾಡಿದೆ. ರೈತರು ಮುಳ್ಳುಸಜ್ಜೆ ನಿಯಂತ್ರಣಕ್ಕೆ ಅಮೋನಿಯಂ ಸಲ್ಫೇಟ್ ಮತ್ತು ಟಿಂಜರ್ ಬಳಕೆ ಮಾಡಿ ಮುಳ್ಳುಸಜ್ಜೆ ಕಳೆ ನಿಯಂತ್ರಣ ಮಾಡಬಹುದಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ತಿಳಿಸಿದ್ದಾರೆ. ಹಾವೇರಿಯ ಕೃಷಿ ಇಲಾಖೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಳ್ಳುಸಜ್ಜೆ ಹತೋಟಿಗೆ ಟಿಂಜರ್ ಮಾತ್ರ ಅಧಿಕೃತ ಕಳೆನಾಶಕ ಔಷಧವಾಗಿದೆ. ರೈತರು ಇವುಗಳನ್ನು ಬಳಕೆ ಮಾಡುವ ಮೂಲಕ ಮುಳ್ಳುಸಜ್ಜೆ ಕಳೆಯನ್ನು ನಿಯಂತ್ರಣ ಮಾಡಬಹುದು ಎಂದರು.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದ ಕರಾವಳಿಯಲ್ಲಿ ನೈಋತ್ಯ ಮುಂಗಾರು ಸಕ್ರಿಯವಾಗಿತ್ತು ಮತ್ತು ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಕರಾವಳಿಯ ಹೆಚ್ಚಿನ ಸ್ಥಳಗಳಲ್ಲಿ, ದಕ್ಷಿಣ ಒಳನಾಡಿನ ಅನೇಕ ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಇಂದು ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಉಡುಪಿ ಮತ್ತು ಹೊನ್ನಾವರದಲ್ಲಿ ಅತಿ ಹೆಚ್ಚು ೧೧ ಸೆಂಟಿ ಮೀಟರ್ ಮಳೆಯಾಗಿದೆ. ಕಾರ್ಕಳ ಮತ್ತು ಬೆಳ್ತಂಗಡಿಯಲ್ಲಿ ತಲಾ ೧೦ ಸೆಂಟಿ ಮೀಟರ್, ಸಿದ್ದಾಪುರ, ಗೇರುಸೊಪ್ಪ, ಕುಂದಾಪುರ, ಅಂಕೋಲಾ ಮತ್ತು ಆಗುಂಬೆಯಲ್ಲಿ ತಲಾ ೯ ಸೆಂಟಿ ಮೀಟರ್, ಕದ್ರಾ, ಪುತ್ತೂರು, ಮೂಡಬಿದ್ರೆ, ಹುಂಚದಕಟ್ಟೆಯಲ್ಲಿ ತಲಾ ೮ ಸೆಂಟಿ ಮೀಟರ್, ಮಂಗಳೂರು, ಧರ್ಮಸ್ಥಳ, ಕಾರವಾರ, ಮಾಣಿ, ಶಿರಾಲಿ ಮತ್ತು ಭಂಟ್ವಾಳದಲ್ಲಿ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಮೂರು ದಿನಗಳ ಕಾಲ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು

ಮತ್ತು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೨೯, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

<><*<><>*><>

ಜನರ ಸಮಸ್ಯೆಗಳನ್ನು ಪರಿಹರಿಸಿ ಮಧ್ಯವರ್ತಿಗಳ ಹಾವಳಿ ತಪ್ಪಿಸಬೇಕು ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ ಮಹದೇವಪ್ಪ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮೈಸೂರಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿಂದು ನಡೆದ ‘ಜಿಲ್ಲಾ ಮಟ್ಟದ ಜನಸ್ಪಂದನ’ ಹಾಗೂ ಇ-ಪೌತಿ ಆಂದೋಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>